ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಕೃಷಿ ಭಾಗ್ಯ ಯೋಜನೆಯ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):-

196(287) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) "ಕೃಷಿ ಭಾಗ್ಯ ಯೋಜನೆ"ಯಡಿ ಕೃಷಿಹೊಂಡ, ಪಾಲಿಹೌಸ್ ಮತ್ತು ನೆರಳುಪರದೆ ಮನೆಗಳನ್ನು ನಿರ್ಮಿಸಲು ಒದಗಿಸುತ್ತಿರುವ ಅನುದಾನದ ಮೊತ್ತವೆಷ್ಟು; ಯಾವ ರೈತರುಗಳು ಸದರಿ ಯೋಜನೆಗೆ ಅರ್ಹರಾಗಿರುತ್ತಾರೆ ;

(ಆ) ಕಳೆದ 03 ವರ್ಷಗಳಲ್ಲಿ ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳ ವ್ಯಾಪ್ತಿಯಲ್ಲಿ "ಕೃಷಿ ಭಾಗ್ಯ ಯೋಜನೆ"ಯಡಿ ಪ್ರಯೋಜನ ಪಡೆದ ರೈತರುಗಳ ಸಂಖ್ಯೆ ಎಷ್ಟು ; (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಯೋಜನೆಗಳ ಮೊತ್ತವನ್ನು ಹೆಚ್ಚಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಸದರಿ ಯೋಜನೆಯ ಮೊತ್ತವನ್ನು ಹೆಚ್ಚಿಸಲಾಗುವುದು ?